# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** ದಿನಾಂಕ: 10.12.2019

## ಜಾಹೀರಾತು ಫಲಕಗಳು ಹಾಗೂ ಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆಗೆ ಆದ್ಯತೆ ನೀಡುವ ಕುರಿತ ಸಭೆ:



ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆಯಲ್ಲಿ ಇಂದು ಜಾಹೀರಾತು ಬೈಲಾ, ಜಾಹೀರಾತು ಫಲಕಗಳು ಹಾಗೂ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆಗೆ ಆದ್ಯತೆ ನೀಡುವ ಕುರಿತ ಸಭೆ ನಡೆಯಿತು. ಈ ವೇಳೆ ಆಡಳಿತ ಪಕ್ಷದ ನಾಯಕರಾದ ಶ್ರೀ ಮುನೀಂದ್ರ ಕುಮಾರ್, ವಿರೋಧ ಪಕ್ಷದ ನಾಯಕರು ಆದ ಅಬ್ದುಲ್ ವಾಜೀದ್, ಜೆಡಿಎಸ್ ಪಕ್ಷದ ನಾಯಕರಾದ ಶ್ರೀಮತಿ ನೇತ್ರಾನಾರಾಯಣ್, ಕಾನೂನು ಕೋಶ ವಿಭಾಗದ ಮುಖ್ಯಸ್ಥರಾದ ಶ್ರೀ ದೇಶಪಾಂಡೆ, ಹಣಕಾಸು ವಿಭಾದ ಜಂಟಿ ಆಯುಕ್ತರಾದ ಶ್ರೀ ವೆಂಕಟೇಶ್, ವಲಯ ಜಂಟಿ ಆಯುಕ್ತರುಗಳಾದ ಶ್ರೀ ಬಾಲಶೇಖರ್, ಶ್ರೀ ರಾಮಕೃಷ್ಣ, ಶ್ರೀ ವೆಂಕಟಾಚಲಪತಿ, ಶ್ರೀ ವೀರಭದ್ರಸ್ವಾಮಿ, ಶ್ರೀ ಅಶೋಕ್ ಹಾಗೂ ಪಾಲಿಕೆ ಉಪಸ್ಥಿತರಿದ್ದರು.

ನಗರಾದ್ಯಂತ ಅಳವಡಿಸಿರುವ ಜಾಹೀರಾತು ಫಲಕಗಳ ಕಬ್ಬಿಣದ ಸ್ಟ್ರಕ್ಚರ್ ಗಳನ್ನು ತೆರವು ಮಾಡುವಂತೆ ಹೈಕೋರ್ಟ್ ಆದೇಶಿಸಿದೆ. ಈ ಸಂಬಂಧ ಕೂಡಲೆ ಕಬ್ಬಿಣ ಸ್ಟ್ರಕ್ಚರ್ ಗಳನ್ನು ತೆರವುಗೊಳಿಸುವಂತೆ ಎಲ್ಲಾ ವಲಯದ ಜಂಟಿ ಆಯುಕ್ತರಿಗೆ ಮಹಾಪೌರರು ಸೂಚನೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಮಹಾಪೌರರು, ನಗರಾದ್ಯಂತ ಅಳವಡಿಸಿರುವ ಜಾಹೀರಾತು ಫಲಕಗಳ ಕಬ್ಬಿಣ ಸ್ಟ್ರಕ್ಚರ್ ಸಮೇತ ತೆರವುಗೊಳಿಸಬೇಕು. ಈ ಪೈಕಿ ಹೋರ್ಡಿಂಗ್ಸ್ ಅಳವಡಿಸುವ ಮಾಲೀಕರಿಗೆ ಈ ಕೂಡಲೆ ತೆರವುಗೊಳಿಸುವಂತೆ ಸೂಚನೆ ನೀಡಿ. ಅವರು ತೆರವುಗೊಳಿಸದಿದ್ದಲ್ಲಿ ಪಾಲಿಕೆಯಿಂದ ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಿ. ತೆರವುಗೊಳಿಸುವ ವೇಳೆ ಅಧಿಕಾರಿ/ಸಿಬ್ಬಂದಿಗಳಿಗೆ ಯಾವುದೇ ಸಮಸ್ಯೆ ಆಗದಂಗೆ ಪೊಲೀಸ್ ರಕ್ಷಣೆ ನೀಡುವಂತೆ ಪೊಲೀಸ್ ಇಲಾಖೆಗೆ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿರುವ ಹೋರ್ಡಿಂಗ್ಸ್, ಪೋಸ್ಟರ್ಸ್, ಮರದ ಮೇಲೆ ಅಳವಡಿಸಿರುವ ಚಿತ್ತಿಪತ್ರ, ಗೋಡೆಬರಹಗಳನ್ನು ಹಂತ ಹಂತವಾಗಿ ತೆರವುಗೊಳಿಸಿ ಬೆಂಗಳೂರನ್ನು ಸುಂದರ ನಗವನ್ನಾಗಿ ಮಾಡಬೇಕು. ಆ ಕಾರಣಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೆ ಕಬ್ಬಿಣದ ಸ್ಟ್ರಕ್ಚರ್ ಗಳನ್ನು ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಪೈಕಿ ಮೊದಲು ಪಾದಚಾರಿ ಮಾರ್ಗ, ರಾಜಕಾಲುವೆಗಳ ಪಕ್ಕ ಅಳವಡಿಸಿರುವ ಹೋರ್ಡಿಂಗ್ಸ್ ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ಹೋರ್ಡಿಂಗ್ಸ್ ಅಳವಡಿಸಿರುವ ಕೆಲ ಮಾಲೀಕರು ನ್ಯಾಯಾಲದಲ್ಲಿ ತಡೆ(Stay) ತಂದಿದ್ದಾರೆ. ಈ ಪೈಕಿ ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಇತ್ಯರ್ಥ ಮಾಡುವಂತೆ ಕಾನೂನು ಕೋಶ ವಿಭಾಗದ ಮುಖ್ಯಸ್ಥರಿಗೆ ಸೂಚನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿರುವ ಎಲ್ಲಾ ಹೋರ್ಡಿಂಗ್ಸ್‌ಗಳನ್ನು ಸಂಪೂರ್ಣವಾಗಿ ತೆರವುಗೊಳಿಸಬೇಕು. ಹೆಬ್ಬಾಳದ ಮೇಲ್ಸೇತುವೆ ಬಳಿ ಅಳವಡಿಸಿರುವ ಹೋರ್ಡಿಂಗ್ ಬಿಡಿಎ ಜಾಗದಲ್ಲಿದ್ದು, ಅವರೇ ಸಾರ್ವಜನಿಕ ಖಾಸಗಿ ಸಹಭಾಗಿತ್ವ(PPP) ಮಾದರಿಯಲ್ಲಿ ಅಳವಡಿಸಲು ಅನುಮತಿ ನೀಡಿದ್ದಾರೆ ಎಂಬ ಮಾಹಿತಿ ಇದೆ. ಈ ಪೈಕಿ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಿ ಹೋರ್ಡಿಂಗ್ಸ್ ತೆರವು ಮಾಡಲು ಕ್ರಮವಹಿಸಲಾಗುವುದು.

**ನಗರದಲ್ಲಿರುವ ಉದ್ದಿಮೆಗಳ ನಾಮಫಲಕಗಳಲ್ಲಿ ಕಡ್ಡಾಯವಾಗಿ ಶೇ.60ರಷ್ಟು ಕನ್ನಡ ಭಾಷೆ ಅಳವಡಿಕೆ ಮಾಡಿಕೊಳ್ಳಬೇಕು. ನೋಟೀಸ್ ಜಾರಿಗೊಳಿಸಿಯೂ ಕನ್ನಡ ನಾಮಫಲಕ ಅಳವಡಿಸದ ಉದ್ದಿಮೆ/ಮಳಿಗೆಗಳಿಗೆ ಪರವಾನಗಿ ರದ್ದುಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.**

ನೋಟೀಸ್ ಜಾರಿಗೊಳಿಸಿರುವ ಉದ್ದಿಮೆ/ಮಳಿಗೆಗಳ ಮೇಲೆ ವಲಯವಾರು ಅನಿರೀಕ್ಷಿತ ತಪಾಸಣೆ ನಡೆಸಿ ಕನ್ನಡ ಭಾಷೆ ನಾಮಫಲಗಳಲ್ಲಿ ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು. ತಪಾಸಣೆ ನಡೆಸುವ ವೇಳೆ ನಾಮಫಲಕ ಯಾವರೀತಿ ಅಳವಡಿಸಬೇಕು ಎಂಬುದರ ಬಗ್ಗೆ ಮಾಲೀಕರಿಗೆ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ 48 ಸಾವಿರ ಉದ್ದಿಮೆಗಳಿಗೆ ಉದ್ದಿಮೆ ಪರವಾನಗಿ ನೀಡಲಾಗಿದೆ. ಆದರೆ, ಬೆಸ್ಕಾಂ ಪ್ರಕಾರ 5 ಲಕ್ಷಕ್ಕೂ ಹೆಚ್ಚು ಉದ್ದಿಮೆಗಳಿವೆ ಎಂಬ ಮಾಹಿತಿ ಇದೆ. ಈ ಪೈಕಿ ಎಲ್ಲಕ್ಕೂ ಉದ್ದಿಮೆ ಪರವಾನಗಿ ನೀಡಿದರೆ ಪಾಲಿಕೆಗೆ ವರಮಾನ ಬರಲಿದೆ. ಈ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಸೂಚಿಸಿದರು. ನಗರದ ಪ್ರಮುಖ ಭಾಗದಲ್ಲಿ ಹೆಚ್ಚು ಆದ್ಯತೆ ನೀಡಬೇಕು. ಜೊತೆಗೆ ಪಬ್ಸ್, ರೆಸ್ಟೋರೆಂಟ್ಸ್ ಹಾಗೂ ಮಾಲ್ ಗಳಲ್ಲಿ ಕನ್ನಡ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**